## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು

ದಿನಾಂಕಃ 11ನೇ ಮಾರ್ಚ್ ತಿಂಗಳು 2026ರಂದು

**ಸಿಸಿ ನಂ.264/2023**

**ಫಿರ್ಯಾದುದಾರರುಃ** ಶ್ರೀ. ಯಾಕೋಬಾ ಬಿನ್ ವೆಂಕಟೇಶ,
ವಯಸ್ಸು ಸುಮಾರು 26ವರ್ಷ,
ವಾಸಃ ಶಂಕರಪುರ ಗ್ರಾಮ, ಹನಗೋಡು
ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀಮತಿ. ಅನುವತಿ.ಎಸ್. ಕೋಂ ಜಗದ್ಬಾಬು @ ಲಾಲು,
ವಯಸ್ಸು ಸುಮಾರು 23ವರ್ಷ, ವಾಸಃ ಅನಾಲ್ ಬೋರೆ,
ಹೊಸ ಬಡಾವಣೆ, ಶಿಕಾರಿಪುರ ಗ್ರಾಮ,
ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಶ್ರೀ.ಯಾಕೋಬಾ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯು-1 ಯಾಕೋಬಾ ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಿತರಾಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ನೀವು ದಿನಾಂಕಃ 10.01.2023ರಂದು ಭೇಟಿಯಾಗಿ ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ಗೃಹಕೃತ್ಯದ ಖರ್ಚಿಗಾಗಿ ಅವರಿಂದ ದಿನಾಂಕಃ ರೂ.2,50,000/-ಗಳನ್ನು ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಯ ಸಲುವಾಗಿ 12.04.2023ರ ದಿನಾಂಕ ನಮೂದಿಸಿ ಸ್ಟೇಟ್ ಬ್ಯಾಂಕ್ ಅಫ್ ಇಂಡಿಯಾ, ನಾಗಮಂಗಲ ಶಾಖೆಯ ಚೆಕ್ ಸಂಖ್ಯೆಃ 696355 ಅನ್ನು ರೂ.2,50,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ನೀಡಿದ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಆಕ್ಸಿಸ್ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ದಿನಾಂಕಃ 12.04.2023ರಂದು ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ದಿನಾಂಕಃ 15.04.2023 ರ ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ಅವರು ತಮ್ಮ ವಕೀಲರ ಮೂಲಕ ನಿಮಗೆ ದಿನಾಂಕಃ 28.04.2023ರಂದು ರಂದು ನಿಮಗೆ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸು ನಿಮಗೆ ದಿನಾಂಕಃ 11.05.2023ರಂದು ಖುದ್ದಾಗಿ ಜಾರಿಯಾಗಿರುತ್ತದೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್ಕಿನಲ್ಲಿ ನಮೂದಿಸಿದ ಹಣವನ್ನು ಮರುಪಾವತಿಸದೇ ಇರುವ ಕಾರಣ ನೀವು ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರ ಮತ್ತು ದೂರನ್ನು ಹಾಜರುಪಡಿಸಿ ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 11.03.2026.

ANITHA Digitally signed by ANITHA Date: 2026.03.11 16:10:39 +0530

Sd/-

**(ಅನಿತ)**

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಪ್ರ.ದ.ನ್ಯಾದಂ., ಹುಣಸೂರು .

ಆರೋಪಿಯ ಸಹಿಃ